ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/47/ಸುತ್ತೋಲೆ/2016-17 (ಭಾ-2)

ದಿನಾಂಕ:06.02.2018.

## ಸುತ್ತೋಲೆ

ವಿಷಯ: ಸಂಸದೀಯ ಉಪನ್ಯಾಸ ಹಾಗೂ ಕಾರ್ಯಗಾರವನ್ನು ಪದವಿ ಕಾಲೇಜುಗಳಿಗೆ ಏರ್ಪಡಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ:01:ಡಿಸಿಇ:2018 ಬೆಂಗಳೂರು ದಿನಾಂಕ:16.01.2018.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿದ್ಯಾರ್ಥಿಗಳಿಗೆ ಸಂಸದೀಯ ಶಿಕ್ಷಣ ಹಾಗೂ ಸದನದ ಕಾರ್ಯಕಲಾಪಗಳ ಅರಿವು ಮೂಡಿಸಲು ಕಾರ್ಯಾಗಾರದ ಅಗತ್ಯತೆ ಇರುವುದರಿಂದ ರಾಜ್ಯಶಾಸ್ತ್ರ ಪದವೀಧರರಿಗೆ ಕಾರ್ಯಕ್ರಮವನ್ನು ಏರ್ಪಡಿಸುವಂತೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಿದ್ದು, ಅದರನ್ವಯ ಇಲಾಖಾ ವ್ಯಾಪ್ತಿಯ ಕಾಲೇಜುಗಳಲ್ಲಿ ಸಂಸದೀಯ ಶಿಕ್ಷಣ ಹಾಗೂ ಸದನದ ಕಾರ್ಯಕಲಾಪಗಳ ಕುರಿತು ರಾಜ್ಯಶಾಸ್ತ್ರ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕಾರ್ಯಾಗಾರವನ್ನು ಆಯೋಜಿಸಿ, ಯಶಸ್ವಿಗೊಳಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಜಂಟಿ ನಿರ್ದೇಶಕರ ಮುಖಾಂತರ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001.
2. ಸಹಾಯಕ ಪ್ರಾರೂಪಕಾರ ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಂಸದೀಯ ವ್ಯವಹಾರಗಳ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಕೆ.ಸಿ. ರೆಡ್ಡಿ ಸರೋಜಮ್ಮ ವೆಲ್‌ಫೇರ್ ಫೌಂಡೇಶನ್, ನಂ.18/2, 18ನೇ ಅಡ್ಡರಸ್ತೆ, ಸದಾಶಿವನಗರ, ಬೆಂಗಳೂರು – 560 080.
4. ಕಛೇರಿ ಪ್ರತಿ.